ಕರ್ನಾಟಕ ಸರ್ಕಾರ

ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇಮಕಾತಿ ಮತ್ತು ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ರವರ ಕಾರ್ಯಾಲಯ

ಸಂಖ್ಯೆ: ಸಿಬ್ಬಂದಿ(2)ಸಿಆರ್/85/2018–19 ದಿನಾಂಕ: /12/2018

ಅಧಿಸೂಚನೆ

ಚಿಕ್ಕಬಳ್ಳಾಪುರ ಜಿಲ್ಲೆ, ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿಗಳ (ಕಂದಾಯ ವೃತ್ತ, ನಾಡಕಚೇರಿ, ಭೂಮಿಕೇಂದ್ರ) ಹುದ್ದೆಗಳನ್ನು ವರ್ಗೀಕರಣ ಮತ್ತು ಮೀಸಲಾತಿ ಅನ್ವಯ ಕರ್ನಾಟಕ ನಾಗರೀಕ ಸೇವೆಗಳು (Revenue Sub-ordinate Branch) (Cadre and Recruitment) (Amendment) ನಿಯಮಗಳು–2008 ರ ನಿಯಮ–2 ರನ್ವಯ ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಆಹ್ವಾನಿಸಲಾಗಿದೆ.

1. ಹುದ್ದೆಗಳ ಸಂಖ್ಯಾ ವಿವರ ಮತ್ತು ವಿದ್ಯಾರ್ಹತೆ :

ಹುದ್ದೆಯ ಹೆಸರು	ಒಟ್ಟು ಹುದ್ದೆ	ವಿದ್ಯಾರ್ಹತೆ
ಗ್ರಾಮಲೆಕ್ಕಾಧಿಕಾರಿ	40	ಪಿ.ಯು.ಸಿ., ಅಥವಾ 12ನೇ ತರಗತಿ ಪರೀಕ್ಷೆಯಲ್ಲಿ (ಸಿಬಿಎಸ್‌ಇ/ ಐಸಿಎಸ್‌ಇ) ಉತ್ತೀರ್ಣರಾಗಿರಬೇಕು ಹಾಗೂ ಕನ್ನಡ ಮತ್ತು ಆಂಗ್ಲ ಭಾಷೆಯ ಗಣಕಯಂತ್ರ ನಿರ್ವಹಣೆ (MS Office) ಬಗ್ಗೆ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ಯಾವುದೊ ಇತರೆ ತತ್ಸಮಾನ ವಿದ್ಯಾರ್ಹತೆ ಅಥವಾ ಮುಕ್ತ ವಿದ್ಯಾಲಯದಿಂದ ನೀಡಲಾದ ಪ್ರಮಾಣ ಪತ್ರ ಪರಿಗಣಿಸಲಾಗುವುದಿಲ್ಲ.

2. ವೇತನ ಶ್ರೇಣಿ :– ರೂ. 21,400–500–22,400–550–24,600–600–27,000–650–29,600–750–32,600–850–36,000–950–39,800–1100–42,000/–

3. ಮೀಸಲಾತಿ ವರ್ಗೀಕರಣ :–

(i) ಒಟ್ಟು 40 ಹುದ್ದೆಗಳು :

ಕ್ರ. ಸಂ.	ಮೀಸಲಾತಿ	ಸಾಮಾನ್ಯ	ಮಹಿಳೆ	ಗ್ರಾಮೀಣ	ಅಂಗವಿಕಲ	ಮಾಜಿಸೈನಿಕ	ಕನ್ನಡ ಮಾಧ್ಯಮ	ಯೋಜನಾ ನಿರಾಶ್ರಿತರು	ಒಟ್ಟು
1	ಪರಿಶಿಷ್ಟ ಜಾತಿ	2	2	1	–	1	–	–	6
2	ಪರಿಶಿಷ್ಟ ಪಂಗಡ	–	–	–	–	1	–	–	1
3	ಪ್ರವರ್ಗ–1	–	1	–	–	1	–	–	2
4	ಪ್ರವರ್ಗ–2(ಎ)	2	2	1	–	1	–	–	6
5	ಪ್ರವರ್ಗ–2(ಬಿ)	–	1	1	–	–	–	–	2
6	ಪ್ರವರ್ಗ–3(ಎ)	–	1	–	–	–	–	–	1
7	ಪ್ರವರ್ಗ–3(ಬಿ)	–	1	–	–	–	1	–	2
8	ಸಾಮಾನ್ಯ	4	6	5	1	2	1	1	20
ಒಟ್ಟು		8	14	8	1	6	2	1	40

---02.

www.kpscvaani.com

4. ಅರ್ಹ ಅಭ್ಯರ್ಥಿಗಳು ಆನ್‌ಲೈನ್ (online) ಮೂಲಕ ಮಾತ್ರವೇ ಅರ್ಜಿಯನ್ನು ಸಲ್ಲಿಸಬೇಕಾಗಿರುತ್ತದೆ. ಅರ್ಜಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯಿಂದ ಒದಗಿಸಲಾಗುವುದಿಲ್ಲ ಹಾಗೂ ಯಾವುದೇ ಕಾರಣಕ್ಕೂ ಸಹ ನೋಂದಾಯಿತ/ಸಾಮಾನ್ಯ ಅಂಚೆ, ಕೊರಿಯರ್ ಅಥವಾ ಇಮೇಲ್ ಮೂಲಕ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಯು ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಅಧಿಕೃತ ವೆಬ್ ಸೈಟ್ http://cbpur-va.kar.nic.in ನ ಆನ್‌ಲೈನ್ ಮುಖಾಂತರ ಗ್ರಾಮಲೆಕ್ಕಿಗರ ನೇರನೇಮಕಾತಿ ಅರ್ಜಿ ತುಂಬುವುದು ವೆಬ್ ಸೈಟ್‌ನ ಮೇಲೆ ಕ್ಲಿಕ್ ಮಾಡಿದಾಗ ತೆರೆದ ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಯು **submit button** ನ್ನು ಒತ್ತಿದರೆ ಅರ್ಜಿ ಸಂಖ್ಯೆ: **(reference number)** ಜನರೇಟ್ ಆಗುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ **(Acknowledgement Slip)** ಮತ್ತು ಚಲನ್‌ನ ದ್ವಿಪ್ರತಿಗಳನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್‌ನ್ನು ಅರ್ಜಿ ಶುಲ್ಕದೊಂದಿಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಯಾವುದೇ ಶಾಖೆಯಲ್ಲಿ ಪಾವತಿಸಬಹುದು. ಪಾವತಿಸುವಾಗ ಚಲನ್‌ನಲ್ಲಿ ಅರ್ಜಿಯ ಸಂಖ್ಯೆ **(reference number)** ಮತ್ತು ಅಭ್ಯರ್ಥಿಯ ಹೆಸರು ಸರಿಯಾಗಿ ನಮೂದಾಗಿದೆಯೇ? ಎಂದು ಅಭ್ಯರ್ಥಿಯು ಪರಿಶೀಲಿಸಿ ದೃಢಪಡಿಸಿಕೊಳ್ಳತಕ್ಕದ್ದು. ಅಭ್ಯರ್ಥಿಗಳು ಸ್ವೀಕೃತಿ ಪತ್ರವನ್ನು ಮತ್ತು ಚಲನ್‌ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಅರ್ಜಿ ಶುಲ್ಕದ ಜೊತೆಗೆ ಬ್ಯಾಂಕ್ ಸರ್ವೀಸ್ ಚಾರ್ಜ್‌ನ್ನು ಸಹಾ ಅಭ್ಯರ್ಥಿಗಳು ಬ್ಯಾಂಕ್‌ಗೆ ಪಾವತಿಸತಕ್ಕದ್ದು. ಈ ದಾಖಲೆಗಳನ್ನು ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಗೆ ನಿಗಧಿಪಡಿಸಿದ ದಿನಾಂಕದಂದು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಇಲ್ಲವಾದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

ಅರ್ಜಿ ಶುಲ್ಕದ ವಿವರ : ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ರೂ. 100/- ಹಾಗೂ ಇತರರಿಗೆ ರೂ. 200/- ಗಳನ್ನು ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರ **State Bank of India, Chikkaballapur** ಶಾಖೆಯಲ್ಲಿನ ಉಳಿತಾಯ ಖಾತೆ ಸಂಖ್ಯೆ : **64030323576** ಗೆ **(IFSC code SBIN0040082)** ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕಕ್ಕೆ ಮುಂಚೆ ಪಾವತಿ ಮಾಡಿ ಚಲನ್ ಸಂಖ್ಯೆಯನ್ನು ಅರ್ಜಿಯಲ್ಲಿ ದಿನಾಂಕದ ಸಹಿತ ತಪ್ಪದೆ ನಮೂದಿಸುವುದು. ನಿಗದಿತ ಶುಲ್ಕ ಪಾವತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅನ್‌ಲೈನ್ ಮೂಲಕ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 14/01/2019 ಆಗಿರುತ್ತದೆ.

5. ವಯೋಮಿತಿ :-

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ 18 ವರ್ಷವಯಸ್ಸು ಪೂರೈಸಿರತಕ್ಕದ್ದು. ಗರಿಷ್ಟ ವಯೋಮಿತಿ ಈ ಕೆಳಕಂಡಂತಿರತಕ್ಕದ್ದು.

ಸಾಮಾನ್ಯ ವರ್ಗ	35 ವರ್ಷ
2ಎ, 2ಬಿ, 3ಎ, 3ಬಿ ಪ್ರವರ್ಗಗಳು	38 ವರ್ಷ
ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ-1	40 ವರ್ಷ
ವಿಧವೆಯರು/ಅಂಗವಿಕಲ/ಜೀತಮುಕ್ತರು	ಚಾಲ್ತಿಯಲ್ಲಿ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಗೆ 10 ವರ್ಷ ಹೆಚ್ಚಿಗೆ ಸೇರಿಸಿಕೊಳ್ಳಲಾಗುವುದು.
ಮಾಜಿ ಸೈನಿಕರು	ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವವರೋ ಅದಕ್ಕೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷ

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರದಲ್ಲಿ ನಮೂದಿಸಿರುವಂತೆ ಜನ್ಮ ದಿನಾಂಕವನ್ನು ಪರಿಗಣಿಸಲಾಗುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) 1977 ರ ನಿಯಮಾವಳಿಗಳ ನಿಯಮ 6 ರಂತೆ ಗರಿಷ್ಟ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರ ಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿ

---03.

www.kpscvaani.com

ಸರ್ಕಾರದಿಂದ ಸ್ಥಾಪಿತವಾಗಿದ್ದು ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದಷ್ಟು ಅಥವಾ (ಹತ್ತು) ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

6. <u>ಮಾಜಿ ಸೈನಿಕರು</u> :–

ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವರು ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೊ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.
ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೆ) ಸೇವೆ ಸಲ್ಲಿಸಿದ ವ್ಯಕ್ತಿ ಎಂದು ಅರ್ಥ. ಅಂದರೆ ಡಿಫೆನ್ಸ್, ಸೆಕ್ಯೂರಿಟಿಕೋರ್, ಜನರಲ್ ರಿಸರ್ವ್ ಇಂಜಿನೀಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ.
ಮತ್ತು (ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಲಿಕೆಯನ್ನು ನೀಡಲಾಗುವುದಿಲ್ಲ.
ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ

7. <u>ಸರ್ಕಾರಿ ನೌಕರ</u> :–

ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಟ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೂ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

8. <u>ಅಂಗವಿಕಲ ಅಭ್ಯರ್ಥಿಗಳು</u> :–

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು–1977 ರ ನಿಯಮ 9(1–ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್–ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ. 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ.117 .ಸೆನೆನಿ.2005, ಬೆಂಗಳೂರು, ದಿನಾಂಕ: 05/09/2005 ಹಾಗೂ ಸಿಆಸುಇ.54.ಎಸ್‌ಅರ್‌ಆರ್.2012, ದಿನಾಂಕ: 23/06/2012 ರಂತೆ 24ನೇ ಬಿಂದುವಿನಲ್ಲಿ ದೃಷ್ಟಿಮಾಂದ್ಯ ಅಭ್ಯರ್ಥಿಗೆ ನಿಗದಿಪಡಿಸಬೇಕಾಗಿರುತ್ತದೆ. ಆದರೆ ಸರ್ಕಾರಿ ಆದೇಶ ಸಂಖ್ಯೆ: ಕಂ.ಇ.100. ಬಿಎಸ್‌ಸಿ.2011, ದಿನಾಂಕ: 29/06/2012 ರ ಆದೇಶದಂತೆ ಕೆಳಕಂಡ ಅಂಗವಿಕಲ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಿ ಇವರುಗಳಲ್ಲಿ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ನಿಗಧಿತ ಪ್ರಮಾಣದ ಅಂಗವೈಕಲ್ಯವುಳ್ಳ ಅಂಗವಿಕಲರಲ್ಲಿ ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ನೇಮಕಾತಿ ಮಾಡಲಾಗುವುದು.

1. ಕುಷ್ಟ ರೋಗದಿಂದ ಗುಣಮುಖರಾದವರು **(Leprosy Cured)**
2. ದೈಹಿಕ ಅಂಗವಿಕಲರು **(Loco motor Disability)**
3. ಶ್ರವಣ ದೋಷವುಳ್ಳವರು **(Hearing impaired)**
4. ಮಾನಸಿಕ ಅಸ್ವಸ್ಥತೆ **(Mentally ill)**

ಈ ಮೇಲಿನ ಅಂಗವಿಕಲರನ್ನು ಹೊರತುಪಡಿಸಿ ಇತರೆ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ ಹಾಗೂ ಈ ವರ್ಗದ ಅಂಗವಿಕಲ ಅಭ್ಯರ್ಥಿಗಳು ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುವ ಕನಿಷ್ಟ ಸಾಮರ್ಥ್ಯ ಹೊಂದಿರಬೇಕಾಗಿರುತ್ತದೆ.

---04.

www.kpscvaani.com

9. <u>ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು</u> :-

ಜಾತಿ ಮೀಸಲಾತಿ ಕೋರಬಯಸುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ-ಡಿ ರಲ್ಲಿ, ಪ್ರವರ್ಗ-1, ಅಭ್ಯರ್ಥಿಗಳು ನಮೂನೆ-ಇ ನಲ್ಲಿ ಹಾಗೂ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು/ಚಾಲ್ತಿಯಲ್ಲಿರಬೇಕು, ನಂತರ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

10. <u>ಯೋಜನೆ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು</u> :-

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್.23.ಎಸ್‌ಆರ್‌ಆರ್.99, ದಿನಾಂಕ: 23/11/2000 ರನ್ವಯ ಈ ಮೀಸಲಾತಿಯಡಿಯಲ್ಲಿ ಕ್ಲೈಮು ಮಾಡುವ ಅಭ್ಯರ್ಥಿಗಳು ಸರ್ಕಾರದ ಆದೇಶದ ಸಂಖ್ಯೆ: ಸಿಆಸುಇ.44.ಸೆಸೇನಿ.2001, ದಿನಾಂಕ: 27/07/2001 ರಲ್ಲಿ ತಿಳಿಸಿರುವಂತೆ ನಿಗದಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

11. <u>ಗ್ರಾಮೀಣ ಅಭ್ಯರ್ಥಿಗಳು</u> :-

ಗ್ರಾಮೀಣ ಅಭ್ಯರ್ಥಿ ಎಂದರೆ ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ., ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿವರೆಗೆ ಗ್ರಾಮಾಂತರ ಪ್ರದೇಶದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ಪಡೆದು ಲಗತ್ತಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ರಲ್ಲಿ ಪ್ರಮಾಣ ಪತ್ರವಲ್ಲದೆ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದು ಅದರ ಒಂದೊಂದು ಪೋಟೋ ಪ್ರತಿಗಳನ್ನು ಇಟ್ಟುಕೊಂಡಿರಬೇಕು.

ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವು ನಮೂನೆ-2 ರಲ್ಲಿ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲುರುಜು ಮತ್ತು ಮೊಹರು ಮಾಡಿಸಿಕೊಂಡಿರತಕ್ಕದ್ದು

12. <u>ಕನ್ನಡ ಮಾಧ್ಯಮ ಅಭ್ಯರ್ಥಿಗಳು</u> :-

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್.71.ಎಸ್‌ಆರ್‌ಆರ್.2001, ದಿನಾಂಕ: 24/10/2002 ರಲ್ಲಿ ಹೊರಡಿಸಿದ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು-1977 ರ ನಿಯಮ (9)(1)(ಸಿ) ರನ್ವಯ ಅಭ್ಯರ್ಥಿಯು 1 ರಿಂದ 10ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರವನ್ನು ಪಡೆದುಕೊಳ್ಳತಕ್ಕದ್ದು.

13. <u>ಅರ್ಹತಾ ಷರತ್ತುಗಳು</u> :-

(ಅ) ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ/ಮಾನಸಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅಭ್ಯರ್ಥಿ ಹುದ್ದೆಗೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

---05.

www.kpscvaani.com

4. <u>ವಿಶೇಷ ಸೂಚನೆಗಳು</u> :–

- ಹುದ್ದೆಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆಗಳನ್ನು ಒದಗಿಸುವುದು.
- ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ., ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ.
- ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2, 2ಬಿ, 3ಎ, 3ಬಿ ಮೀಸಲಾತಿಯ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ವಿಧವೆಯಾಗಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ
- ಜಿಲ್ಲಾ ವೈದ್ಯಕೀಯ ಮಂಡಳಿಯಿಂದ ಪಡೆದ ದೃಢೀಕರಣ ಪತ್ರ ಮತ್ತು ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಅಥವಾ ನಕಲಿ ಅಂಕಪಟ್ಟಿ/ದೃಢೀಕರಣ ಪತ್ರ ಸಲ್ಲಿಸುವುದು ಇತ್ಯಾದಿ ಕಂಡು ಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
- ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಆದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅರಿವು ಅವಶ್ಯಕತೆ ಕಡ್ಡಾಯವಾಗಿರುತ್ತದೆ.
- ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನ ಯಾವುದೇ ಸಂದರ್ಭದಲ್ಲಿ ಹುದ್ದೆಗಳ ಸಂಖ್ಯೆಯನ್ನು ಹೆಚ್ಚು ಮಾಡುವ/ಕಡಿತಗೊಳಿಸುವ ಅಥವಾ ನಿಯಮಾನುಸಾರ ಅಗತ್ಯವಾದ ಯಾವುದೇ ಹೆಚ್ಚುವರಿ ಷರತ್ತುಗಳನ್ನು ವಿಧಿಸುವ ಅಥವಾ ಸಡಿಲಗೊಳಿಸುವ ಅಥವಾ ಅಧಿಸೂಚನೆಗೆ ಯಾವುದೇ ಬದಲಾವಣೆ ಮಾಡುವ ಅಧಿಕಾರ ಹಾಗೂ ಯಾವುದೇ ಕಾರಣ ನೀಡದೆ ನೇಮಕಾತಿ ಪ್ರಕ್ರಿಯೆಯನ್ನು ರದ್ದುಪಡಿಸುವ ಅಧಿಕಾರ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.
- ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ಇಲಾಖಾ ಮುಖ್ಯಸ್ಥರ ಅನುಮತಿ ಪಡೆದು ಸಲ್ಲಿಸುವುದು.
- ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಾತಿ ಮತ್ತು ಅದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
- ಆಯ್ಕೆ ಮತ್ತು ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ರವರು ಕಾಯ್ದಿರಿಸಿಕೊಂಡಿರುತ್ತಾರೆ.
- ಕಾಲೇಜಿನ ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ ಹಾಗೂ ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ 6 ತಿಂಗಳೊಳಗಿನ ಇತ್ತೀಚಿನ ನಡತೆ ಪ್ರಮಾಣ ಪತ್ರ ಲಗತ್ತಿಸಬೇಕು.
- ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಪಡೆದ **Acknowledgement** ಹಾಗೂ **Challan** ನ್ನು ಬ್ಯಾಂಕ್‌ನಲ್ಲಿ ಪಾವತಿಸಿದ ನಂತರ ಅಭ್ಯರ್ಥಿಯ ಪ್ರತಿಯನ್ನು ಮಡಚುವುದಾಗಲೀ, ಹರಿಯುವುದಾಗಲೀಮಾಡದೇ

–––06.

www.kpscvaani.com

ಹಾಳಾಗದಂತೆ ಎಚ್ಚರವಹಿಸತಕ್ಕದ್ದು ಹಾಗೂ ದಾಖಲಾತಿ ಪರಿಶೀಲನೆಗೆ ಕಡ್ಡಾಯವಾಗಿ ಹಾಜರುಪಡಿಸುವುದು.

- ಕರ್ನಾಟಕ ಜನರಲ್ ಸರ್ವೀಸ್ (Revenue Sub-ordinated) (Cadre & Recruitment) (ತಿದ್ದುಪಡಿ) ನಿಯಮಗಳು-2008 ಮತ್ತು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು-1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಅಥವಾ ಸಿಬಿಎಸ್‌ಸಿ. ಅಥವಾ ಐಸಿಎಸ್‌ಇ ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (on merit) ಮತ್ತು ಮೀಸಲಾತಿ ಆಧಾರದ ಮೇಲೆ ಮಾತ್ರ ಆಯ್ಕೆ ಮಾಡಲಾಗುವುದು. ಯಾವುದೇ ಇತರೆ ತತ್ಸಮಾನ ವಿದ್ಯಾರ್ಹತೆ ಅಥವಾ ಮುಕ್ತ ವಿದ್ಯಾಲಯದಿಂದ ನೀಡಲಾದ ಪ್ರಮಾಣ ಪತ್ರಗಳನ್ನು ಹಾಗೂ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದಿಲ್ಲ.
- 1:5 ಅನುಪಾತದಲ್ಲಿ Provisional ಪಟ್ಟಿ ಪ್ರಕಟಿಸಲಾಗುವುದು. ಹಾಗೂ ಅಭ್ಯರ್ಥಿಯ ಹೆಸರು Provisional List ನಲ್ಲಿ ನಮೂದಿಸಿದ ಮಾತ್ರಕ್ಕೆ ಅವರ ಆಯ್ಕೆ ಅಂತಿಮವಾಗಿದೆ ಎಂದು ಭಾವಿಸತಕ್ಕದ್ದಲ್ಲ. ಆಯ್ಕೆಯ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಅವಕಾಶ ಇರುವುದಿಲ್ಲ.
- 1:5 ಅನುಪಾತದಲ್ಲಿ Provisional ಪಟ್ಟಿ ಪ್ರಕಟಿಸಿದ ಸಂದರ್ಭದಲ್ಲಿ ಅರ್ಜಿ ಸಲ್ಲಿಸಿದ ಬಗ್ಗೆ ಆನ್‌ಲೈನ್‌ನಲ್ಲಿ ಪಡೆದ Acknowledgement ಹಾಗೂ ಅರ್ಜಿ ಶುಲ್ಕ ಪಾವತಿಸಿದ ಬಗ್ಗೆ ಚಲನ್, ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಮೂಲ ಅಂಕಪಟ್ಟಿ, ಗಣಕಯಂತ್ರ ನಿರ್ವಹಣೆ (MS Office) ಬಗ್ಗೆ ಪ್ರಮಾಣ ಪತ್ರ, ಮೀಸಲಾತಿ ಕೋರಿದ್ದಲ್ಲಿ ಮೀಸಲಾತಿ ಸಂಬಂಧಪಟ್ಟ ನಿಗದಿತ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗಾಗಿ ಪಡೆದುಕೊಂಡಿರಬೇಕು ಹಾಗೂ ಇವುಗಳನ್ನೇ ಪರಿಶೀಲನೆಗೆ ಕಡ್ಡಾಯವಾಗಿ ಹಾಜರುಪಡಿಸಬೇಕು. ಇಲ್ಲವಾದಲ್ಲಿ ನೇಮಕಾತಿ ಪರಿಗಣನೆಗೆ ತೆಗೆದುಕೊಳ್ಳುವುದಿಲ್ಲ.
- ಅಂತಿಮವಾಗಿ ಆಯ್ಕೆಯಾದ ಅಭ್ಯರ್ಥಿಗಳು ಯಾವುದೇ ಕಾರಣಕ್ಕೂ ಸಹ 5 ವರ್ಷದವರೆವಿಗೂ ನಿಯಮ-6 ರಡಿ ಯಾವುದೇ ಅಂತರ್ ಜಿಲ್ಲಾ ಘಟಕೀಯ ವರ್ಗಾವಣೆಗೆ ಅರ್ಹರಾಗುವುದಿಲ್ಲ ಹಾಗೂ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಗ್ರಾಮಲೆಕ್ಕಿಗರ ನೇರನೇಮಕಾತಿಗೆ ಅರ್ಜಿಗಳನ್ನು ಸಲ್ಲಿಸಲು ಈ ಪ್ರಾಧಿಕಾರದಿಂದ ಯಾವುದೇ ನಿರಾಕ್ಷೇಪಣಾ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ರಾಜ್ಯದ ಬೇರೆ ಇಲಾಖೆಗಳಲ್ಲಿ ನೇರನೇಮಕಾತಿ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸಲು ಈ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪತ್ರವನ್ನು ನೀಡಲಾಗುವುದಿಲ್ಲ.
- ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದುಪಡಿಸುವ ಅಥವಾ ವಿಧಿಸಲಾಗಿರುವ ಯಾವುದೇ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ಅಧಿಕಾರವನ್ನು ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.
- ಈ ಅಧಿಸೂಚನೆಯಲ್ಲಿನ ಪ್ರತಿಯೊಂದು ಅಂಶಗಳನ್ನು ಪೂರ್ಣವಾಗಿ ಓದಿಕೊಂಡು ಅರ್ಜಿಯನ್ನು ಸಲ್ಲಿಸುವುದು. ಯಾವುದೇ ಅಪರಿಪೂರ್ಣವಾದ ದಾಖಲೆಗಳನ್ನು ಹೊಂದಿ ಅರ್ಜಿ ಸಲ್ಲಿಸುವುದು ಕಾನೂನು ಬಾಹಿರವಾಗಿರುತ್ತದೆ.
- ಅಧಿಸೂಚನೆಯಲ್ಲಿನ ಹುದ್ದೆಗಳ ಸಂಖ್ಯೆಯು ತಾತ್ಕಲಿಕವಾಗಿದ್ದು ಅಧಿಸೂಚನೆ ನಂತರ ಖಾಲಿಯಾಗುವ ಹುದ್ದೆಗಳಿಗೆ ಅನ್ವಯಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು ಹೆಚ್ಚುವರಿ ಅಧಿಸೂಚಿತ ಹುದ್ದೆಗಳನ್ನು ಅಂತಿಮ ಆಯ್ಕೆ ಪಟ್ಟಿ ಪ್ರಕಟವಾದ ನಂತರ ಖಾಲಿಯಾಗಲಿರುವ ಹುದ್ದಗಳಿಗೆ ಅನುಸಾರವಾಗಿ ದಾಖಲಾತಿ ನೈಜತೆಯನ್ನು ದೃಢಪಡಿಸಿಕೊಂಡ ನಂತರ ನೇಮಕಾತಿ ಆದೇಶವನ್ನು ನೀಡಲಾಗುವುದು.

ಅನಿರುದ್ಧ್ ಶ್ರವಣ್.ಪಿ ಭಾ.ಆ.ಸೇ.,
ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇಮಕಾತಿ ಮತ್ತು ಆಯ್ಕೆ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ.

ಪ್ರತಿಯನ್ನು :-

1. ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ರವರ ದಯಾಪರ ಅವಗಾಹನೆಗಾಗಿ ಸಲ್ಲಿಸಿದೆ.

---07.

www.kpscvaani.com

2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ದಯಾಪರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರಿಗೆ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
4. ಮಹಾಲೇಖಪಾಲರು, ಕರ್ನಾಟಕ-ಬೆಂಗಳೂರು ಇವರ ಅವಗಾಹನೆಗಾಗಿ ಸಲ್ಲಿಸಿದೆ.
5. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ..... ಕಳುಹಿಸುತ್ತಾ, ತಮ್ಮ ಕಾರ್ಯಾಲಯದ ಪ್ರಕಟಣಾ ಫಲಕದಲ್ಲಿ ಅಧಿಸೂಚನೆಯನ್ನು ಪ್ರಚುರಪಡಿಸಲು ಕೋರಿದೆ.
6. ಉಪಮಹಾನಿರ್ದೇಶಕರು, ದೂರದರ್ಶನ (ಚಂದನ) ಜೆ.ಸಿ. ರಸ್ತೆ, ಬೆಂಗಳೂರು ರವರಿಗೆ ಕಳುಹಿಸುತ್ತಾ, ಈ ಅಧಿಸೂಚನೆ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ವಾಹಿನಿಯಲ್ಲಿ ಸುದ್ದಿ ಪ್ರಸಾರ ಮಾಡಲು (ಸರ್ಕಾರಕ್ಕೆ ವೆಚ್ಚ ಬಾರದಂತೆ) ಕೋರಿದೆ.
7. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ರವರಿಗೆ ರವಾನಿಸುತ್ತಾ, ಅಧಿಸೂಚನೆಯನ್ನು ರಾಜ್ಯ ವ್ಯಾಪಿ ವ್ಯಾಪಕವಾಗಿ ಪ್ರಚಲಿತದಲ್ಲಿರುವ ಒಂದು ಆಂಗ್ಲ ಮತ್ತು ಒಂದು ಕನ್ನಡ ಭಾಷಾ ದಿನಪತ್ರಿಕೆಯಲ್ಲಿ ಸಾರ್ವಜನಿಕರ ಮಾಹಿತಿಗಾಗಿ ನಾಳಿನ ಪತ್ರಿಕೆಯಲ್ಲಿಯೇ ತಪ್ಪದೆ ಪ್ರಕಟಿಸಿ ದಿನಪತ್ರಿಕೆಯ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.
8. ಜಿಲ್ಲೆಯ ಎಲ್ಲಾ ತಾಲ್ಲೂಕು ತಹಶೀಲ್ದಾರರಿಗೆ ರವಾನಿಸುತ್ತಾ, ಪ್ರತಿಯನ್ನು ನಿಮ್ಮ ಕಛೇರಿಯ ಪ್ರಕಟಣಾ ಫಲಕದಲ್ಲಿ ಸಾರ್ವಜನಿಕರ ಮಾಹಿತಿಗಾಗಿ.

ಅನಿರುದ್ಧ್ ಶ್ರವಣ್.ಪಿ ಭಾ.ಆ.ಸೇ.,
ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇಮಕಾತಿ ಮತ್ತು ಆಯ್ಕೆ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ.

www.kpscvaani.com